## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬರವಣಿಗೆ ಸಾಮರ್ಥ್ಯವನ್ನು ಕುಂಠಿತಗೊಳಿಸುವ ಚಲನವಲನ ವೈಕಲ್ಯ ಮತ್ತು ಮೆದುಳಿನ ಪಾರ್ಶ್ವವಾಯು (Locomotor disability and Cerebral palsy) ಅಂಗವಿಕಲತೆಯನ್ನು ಹೊಂದಿದ ಅಭ್ಯರ್ಥಿಗಳಿಗೆ ಗೆಜೆಟೆಡ್ ಪ್ರೊಬೆಷನರ್‌ಗಳ ಮುಖ್ಯ ಪರೀಕ್ಷೆಯನ್ನು ಬರೆಯಲು ಹೆಚ್ಚುವರಿ ಸಮಯಾವಕಾಶ ನೀಡುವ ಬಗ್ಗೆ.

**ಓದಲಾಗಿದೆ:** ದಿನಾಂಕ: 30.10.2007ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ಸೆನೆನಿ 2006.

*****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 30.10.2007ರ ಆದೇಶದಲ್ಲಿ ಕರ್ನಾಟಕ ಲೋಕಸೇವಾ ಆಯೋಗ/ಸರ್ಕಾರದ ವಿವಿಧ ಇಲಾಖೆಗಳಲ್ಲಿ ಆಯ್ಕೆ ಪ್ರಾಧಿಕಾರಗಳು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಂಧ/ದೃಷ್ಟಿಮಾಂದ್ಯ ಅಭ್ಯರ್ಥಿಗಳಿಗೆ ಸಿವಿಲ್ ಸೇವಾ ಪರೀಕ್ಷೆಯನ್ನು ಬರೆಯಲು ಲಿಪಿಕಾರರನ್ನು ಒದಗಿಸಲು ಮತ್ತು ಪ್ರತಿ ಒಂದು ಗಂಟೆಗೆ ಹತ್ತು ನಿಮಿಷಗಳ ಹೆಚ್ಚುವರಿ ಸಮಯವನ್ನು ನೀಡಲು ಆದೇಶಿಸಲಾಗಿದೆ. ಇದೇ ರೀತಿ ಚಲನವಲನ ವೈಕಲ್ಯ (Locomotor disability) ಮತ್ತು ಮೆದುಳಿನ ಪಾರ್ಶ್ವವಾಯು (Cerebral palsy)ಗೆ ಒಳಗಾದ ಅಂಗವಿಕಲರಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗೆಜೆಟೆಡ್ ಪ್ರೊಬೆಷನರ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997ರನ್ವಯ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಯಲ್ಲಿ ಪ್ರತಿ ಒಂದು ಗಂಟೆಗೆ ಇಪ್ಪತ್ತು ನಿಮಿಷಗಳ ಹೆಚ್ಚುವರಿ ಸಮಯಾವಕಾಶವನ್ನು ನೀಡುವಂತೆ ಕೋರಿ ಸರ್ಕಾರದಲ್ಲಿ ಮನವಿ/ಕೋರಿಕೆಗಳು ಸ್ವೀಕೃತವಾಗಿವೆ.

ಮೇಲ್ಕಂಡ ಕೋರಿಕೆಯ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಚಲನವಲನ ವೈಕಲ್ಯ (Locomotor disability) ಮತ್ತು ಮೆದುಳಿನ ಪಾರ್ಶ್ವವಾಯು (Cerebral palsy)ಗೆ ಒಳಗಾದ ಅಂಗವಿಕಲರಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗೆಜೆಟೆಡ್ ಪ್ರೊಬೆಷನರ್‌ಗಳ ಹುದ್ದೆಗಳ ನೇಮಕಾತಿಗೆ ನಡೆಸುವ ಸ್ಪರ್ಧಾತ್ಮಕ ಮುಖ್ಯ ಪರೀಕ್ಷೆಯಲ್ಲಿ ಉತ್ತರಿಸಲು ಪ್ರತಿ ಒಂದು ಗಂಟೆ ಪರೀಕ್ಷಾವಧಿಗೆ ಇಪ್ಪತ್ತು ನಿಮಿಷಗಳ ಹೆಚ್ಚುವರಿ ಸಮಯಾಕಾಶವನ್ನು ನೀಡಲು ಸರ್ಕಾರ ತೀರ್ಮಾನಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 171 ಸೆನೆನಿ 2010,**
**ಬೆಂಗಳೂರು, ದಿನಾಂಕ: 19.11.2010.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗೆಜೆಟೆಡ್ ಪ್ರೊಬೆಷನರ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997ರನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗೆಜೆಟೆಡ್ ಪ್ರೊಬೆಷನರ್‌ಗಳ ಹುದ್ದೆಗಳ ನೇಮಕಾತಿಗೆ ನಡೆಸುವ ಸ್ಪರ್ಧಾತ್ಮಕ ಮುಖ್ಯ ಪರೀಕ್ಷೆಯಲ್ಲಿ ಚಲನವಲನ ವೈಕಲ್ಯ (Locomotor disability) ಮತ್ತು ಮೆದುಳಿನ ಪಾರ್ಶ್ವವಾಯು (Cerebral palsy) ಗೆ ಒಳಗಾದ ಅಂಗವಿಕಲ ಅಭ್ಯರ್ಥಿಗಳಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಶ್ನೆ ಪತ್ರಿಕೆ ಉತ್ತರಿಸಲು ಪ್ರತಿ ಒಂದು ಗಂಟೆ ಪರೀಕ್ಷಾವಧಿಗೆ ಇಪ್ಪತ್ತು ನಿಮಿಷಗಳ ಹೆಚ್ಚುವರಿ ಸಮಯಾವಕಾಶ ನೀಡಲು ಸರ್ಕಾರ ಆದೇಶಿಸಿದೆ.

... 2

1) ಅಭ್ಯರ್ಥಿಯು ಅಂಗವಿಕಲ ಮೀಸಲಾತಿ ಸೌಲಭ್ಯ ಕೋರಿ ಅರ್ಜಿಯೊಂದಿಗೆ ನಿಗದಿತ ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸಿರಬೇಕು.

2) ಚಲನವಲನ ವೈಕಲ್ಯ (Locomotor disability) ಮತ್ತು ಮೆದುಳಿನ ಪಾರ್ಶ್ವವಾಯು (Cerebral palsy)ಗೆ ಒಳಗಾದ ಅಂಗವಿಕಲ ಅಭ್ಯರ್ಥಿಗಳ ಬರವಣಿಗೆ ಸಾಮರ್ಥ್ಯವು ಕುಂಠಿತವಾಗಿರಬೇಕು. (ಅಂಗವಿಕಲತೆಯ ಪ್ರಮಾಣ ಶೇಕಡ 40 ಹಾಗೂ ಅದಕ್ಕಿಂತ ಹೆಚ್ಚಿನದಾಗಿರಬೇಕು)

3) ಈ ಅಭ್ಯರ್ಥಿಗಳು, ಅಂದರೆ ಚಲನವಲನ ವೈಕಲ್ಯ (Locomotor disability) ಮತ್ತು ಮೆದುಳಿನ ಪಾರ್ಶ್ವವಾಯು (Cerebral palsy)ಗೆ ಒಳಗಾದ ಅಂಗವಿಕಲ ಅಭ್ಯರ್ಥಿಗಳು ಲಿಪಿಕಾರರ (scribe) ಸಹಾಯ ಪಡೆಯುವಂತಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Devaraju

(ದೇವರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ, ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, 200 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-ಎ) ಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿ:

1) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2) ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು
3) ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
4) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5) ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು
6) ಎಲ್ಲಾ ಇಲಾಖಾ ಮುಖ್ಯಸ್ಥರುಗಳು
7) ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
8) ಸಚಿವಾಲಯದ ಎಲ್ಲಾ ಶಾಖೆಗಳ ಶಾಖಾಧಿಕಾರಿಗಳು
9) ಮಹಾಲೇಖಪಾಲಕರು, ಕರ್ನಾಟಕ, ಬೆಂಗಳೂರು-1
10)*ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್/ವಿಧಾನ ಸಭೆ, ಬೆಂಗಳೂರು
11)*ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
12)*ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13)*ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು-38
14)*ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು-1
15) ವಾರದ ರಾಜ್ಯಪತ್ರ/ರಕ್ಷಾ ಕಡತ/ಬಿಡಿ ಪ್ರತಿಗಳು

*(ಪ್ರತ್ಯೇಕ ಮುಖ ಪತ್ರದೊಡನೆ)